ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/50/ಅಕಾಹು/2018-19/ನೇ.ವಿ-2

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:21.05.2018.

## ಸುತ್ತೋಲೆ

ವಿಷಯ:- ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳು ನಡೆಸುತ್ತಿರುವ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ.

ಉಲ್ಲೇಖ:- 1. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/156/ಯುಪಿಸಿ/2013, ದಿ:03.07.2014
2. ಸರ್ಕಾರದ ಪತ್ರ ಸಂಖ್ಯೆ:ಇಡಿ/240/ಯುಪಿಸಿ/2014, ದಿ:01.09.2017

** ** **

ಉಲ್ಲೇಖ(2)ರ ಸರ್ಕಾರದ ಪತ್ರದಲ್ಲಿ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ದಿನಾಂಕ:31.12.2015ರೊಳಗೆ, ನಿವೃತ್ತಿ, ಮರಣ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ಖಾಲಿಯಾಗಿರುವ ಬೋಧಕ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಲು ಸರ್ಕಾರವು ಸಹಮತಿಸಿರುತ್ತದೆ.

ಅದರಂತೆ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳು ಅವರ ವ್ಯಾಪ್ತಿಗೆ ಬರುವ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ಕೋರಿ ಪ್ರಸ್ತಾವನೆಗಳು ಈ ಕಛೇರಿಯಲ್ಲಿ ಸ್ವೀಕೃತಗೊಳ್ಳುತ್ತಿವೆ. ಆದರೆ ಸದರಿ ಪ್ರಸ್ತಾವನೆಗಳನ್ನು ಪರಿಶೀಲಿಸಿದಾಗ, ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆ/ಕಾಲೇಜುಗಳೆಂದು ಸಂಬಂಧಪಟ್ಟ ಪ್ರಾಧಿಕಾರದಿಂದ ಉಲ್ಲೇಖ (1)ರ ಅಧಿಸೂಚನೆಯಲ್ಲಿ ತಿಳಿಸಿರುವಂತೆ ಘೋಷಣೆಯಾಗಿರುವ/ನವೀಕರಣಗೊಂಡಿರುವ ಬಗ್ಗೆ ದೃಢೀಕೃತ ದಾಖಲೆಗಳನ್ನು ಪ್ರಸ್ತಾವನೆಯೊಂದಿಗೆ ಸಲ್ಲಿಸದಿರುವುದು ಈ ಕಛೇರಿಯ ಗಮನಕ್ಕೆ ಬಂದಿದ್ದು, ಇದರಿಂದ ನೇಮಕಾತಿ ಪ್ರಕ್ರಿಯೆ ವಿಳಂಬವಾಗುತ್ತಿದೆ.

ಆದ್ದರಿಂದ, ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿ ಹುದ್ದೆ ಭರ್ತಿ ಮಾಡುವ ಬಗ್ಗೆ ಪ್ರಸ್ತಾವನೆಯನ್ನು ಸಲ್ಲಿಸುವಾಗ, ಉಲ್ಲೇಖ(1)ರ ಸರ್ಕಾರದ ಅಧಿಸೂಚನೆಯಲ್ಲಿ ತಿಳಿಸಿರುವಂತೆ ಅಲ್ಪಸಂಖ್ಯಾತ ಸ್ಥಾನಮಾನ ಘೋಷಿಸಿರುವ/ನವೀಕರಿಸಿರುವ ಬಗ್ಗೆ ದೃಢೀಕೃತ ಪ್ರತಿಯೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸಲು ಸೂಚಿಸಲಾಗಿದೆ.

23/5/18

**ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು**

**ಇವರಿಗೆ:**

1. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮಂಗಳೂರು, ಮೈಸೂರು, ಶಿವಮೊಗ್ಗ, ಧಾರವಾಡ ಮತ್ತು ಕಲಬುರಗಿ.
2. ಎಲ್ಲಾ ಖಾಸಗಿ ಅನುದಾನಿತ ಅಲ್ಪಸಂಖ್ಯಾತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ಅಧಿಕಾರಿಗಳು ಈ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ಸೂಚಿಸಲಾಗಿದೆ.
4. ಕಛೇರಿ ಪ್ರತಿ

D:\Appt.Sec\Srinivas\dce-50-ha kha hu-2018-19-nevi-2.docx

Pl Upload
24/5